## ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಇವರು ಶೂನ್ಯ ವೇಳೆಯಲ್ಲಿ ಮಂಡಿಸಿರುವ ಪ್ರಸ್ತಾವನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಆಸ್ತಿ ವಿವರ ನೀಡಿದ ಗ್ರಾಮ ಪಂಚಾಯತ್ ಸದಸ್ಯರನ್ನು ಅನರ್ಹ ಮಾಡಿರುವ ಪ್ರಕರಣ ಇಂದಿನ ಕನ್ನಡಪ್ರಭ ಪತ್ರಿಕೆಯಲ್ಲಿ ವರದಿಯಾಗಿದೆ. ಗ್ರಾಮ ಪಂಚಾಯತ್ ಸದಸ್ಯರನ್ನು ಅನರ್ಹ ಮಾಡುವ ಮುನ್ನ ಸದಸ್ಯರಿಗೆ ಶೋಕಾಸ್ ನೋಟಿಸ್ ನೀಡಿ ಸ್ಪಷ್ಟನೆ ಕೇಳುವ ವಿಚಾರದಲ್ಲಿ ಗೊಂದಲವಿದ್ದು, ನ್ಯಾಯಾಲಯದ ಆದೇಶದಿಂದ ಕರ್ನಾಟಕ ರಾಜ್ಯದ 93,000ಕ್ಕೂ ಹೆಚ್ಚು ಗ್ರಾಮ ಪಂಚಾಯತ್ ಸದಸ್ಯರು ಆತಂಕಕ್ಕೀಡಾಗಿದ್ದಾರೆ. ಸ್ವಾಭಾವಿಕವಾಗಿ ಗ್ರಾಮ ಪಂಚಾಯತ್ ಸದಸ್ಯರಲ್ಲಿ ಶೇಕಡ 25ರಷ್ಟು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರು, ಶೇಕಡ 50ರಷ್ಟು ಮಹಿಳೆಯರು ಹಾಗೂ ಸಾಕಷ್ಟು ಪ್ರಮಾಣದಲ್ಲಿ ಹಿಂದುಳಿದ ವರ್ಗದವರಿದ್ದು, ಆರ್ಥಿಕವಾಗಿ ಬಡವರಿದ್ದಾರೆ. ಮೀಸಲಾತಿ ಆಧಾರದಲ್ಲಿ ಗೆದ್ದು ಬಂದ ಅನೇಕ ಸದಸ್ಯರಿಗೆ ಅನುಭವ ಕೊರತೆ ಇರುತ್ತದೆ. ಹಾಗಾಗಿ ಸಕಾಲದಲ್ಲಿ ಆಸ್ತಿ ವಿವರ ಸಲ್ಲಿಸದಿರುವವರ ಸದಸ್ಯತ್ವವನ್ನು ರದ್ದುಗೊಳಿಸಲು ಚುನಾವಣಾ ಆಯೋಗ ಕ್ರಮ ಕೈಗೊಳ್ಳುತ್ತಿದ್ದು, ಇದರಿಂದ ಸಂವಿಧಾನದ 73ನೇ ತಿದ್ದುಪಡಿಯ ಒಟ್ಟು ಆಶಯಕ್ಕೆ ಧಕ್ಕೆ ಆಗಿರುತ್ತದೆ.

ಗ್ರಾಮ ಪಂಚಾಯತ್ ಸದಸ್ಯರಾಗಿ ಬಡವರ ಮಧ್ಯ ಕೆಲಸ ಮಾಡಿಕೊಂಡು ಹೋಗುತ್ತಿರುವ ಸದಸ್ಯರಲ್ಲಿ ಅನೇಕರು ಬಿಪಿಎಲ್ ಕುಟುಂಬಕ್ಕೆ ಸೇರಿರುವ ಬಡವರಾಗಿರುತ್ತಾರೆ. ತುಂಬಾ ಜನ ಸದಸ್ಯರಿಗೆ ಸಂಪನ್ಮೂಲಗಳೇ ಇರುವುದಿಲ್ಲ. ಇಂತಹ ಸಂದರ್ಭದಲ್ಲಿ ಆಸ್ತಿ ವಿವರಣೆ ಸಲ್ಲಿಸದವರ ಸದಸ್ಯತ್ವ ರದ್ದುಗೊಳಿಸುವುದು ಕಾನೂನ ಹೆಸರಿನಲ್ಲಿ ಗ್ರಾಮ ಪಂಚಾಯತ್ ಸದಸ್ಯರಿಗೆ ಆಗುತ್ತಿರುವ ತೊಂದರೆ. ಈ ಹಿನ್ನಲೆಯಲ್ಲಿ ಸರ್ಕಾರ ಕೂಡಲೇ ಆದೇಶ ಹೊರಡಿಸಿ ಗ್ರಾಮ ಪಂಚಾಯತ್ ಸದಸ್ಯರ ಆಸ್ತಿ ವಿವರ ಸಲ್ಲಿಸುವ ವ್ಯವಸ್ಥೆಯನ್ನು ರದ್ದುಗೊಳಿಸಬೇಕು ವಿನಾಃಕಾರಣ ಪಂಚಾಯತ್ ಸದಸ್ಯರಿಗೆ ತೊಂದರೆ ಕೊಡುವುದನ್ನು ನಿಲ್ಲಿಸಬೇಕು ಎಂಬ ಬಗ್ಗೆ.

**ಉತ್ತರ:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43-ಬಿ ಈ ಕೆಳಕಂಡಂತಿದೆ.

"**43-ಬಿ.- ಸದಸ್ಯರಿಂದ ಆಸ್ತಿಗಳ ಮತ್ತು ಹೊಣೆಗಾರಿಕೆಗಳ ಘೋಷಣೆ.**- (1) ಪ್ರತಿಯೊಬ್ಬ ಸದಸ್ಯನು, ತಾನು ಮತ್ತು ತನ್ನ ಅವಿಭಕ್ತ ಕುಟುಂಬದ ಎಲ್ಲಾ ಸದಸ್ಯರು ಎರಡು ಲಕ್ಷಕ್ಕಿಂತ ಹೆಚ್ಚಿನ ಚರ ಮತ್ತು ಸ್ಥಿರ ಆಸ್ತಿಯನ್ನು ಮತ್ತು ಹೊಣೆಗಾರಿಕೆಗಳನ್ನು ಹೊಂದಿರುವುದರ ಬಗ್ಗೆ ರಾಜ್ಯ ಚುನಾವಣಾ ಆಯೋಗದ ಮುಂದೆ ಘೋಷಣೆಯನ್ನು ನಿಯಮಿಸಬಹುದಾದಂಥ ನಮೂನೆಯಲ್ಲಿ ತನ್ನ ಪದಾವಧಿಯು ಪ್ರಾರಂಭವಾದ ದಿನಾಂಕದಿಂದ ಮೂರು ತಿಂಗಳ ಒಳಗೆ ಮತ್ತು ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ ಅವನ ಅಧಿಕಾರಾವಧಿ ಮುಗಿಯುವ ತನಕ ಮತ್ತು ಪ್ರತಿ ಆರ್ಥಿಕ ವರ್ಷ ಮುಕ್ತಾಯವಾದ ಒಂದು ತಿಂಗಳ ಒಳಗೆ ಸಂಬಂಧಪಟ್ಟ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯ ಮೂಲಕ ದಾಖಲು ಮಾಡತಕ್ಕದ್ದು.

ಪರಂತು, ಹಣಕಾಸು ವರ್ಷ ಮುಕ್ತಾಯವಾಗುವ ಎರಡು ತಿಂಗಳಿಗಿಂತ ಮೊದಲು ಅಂಥ ಸದಸ್ಯನ ಪದಾವಧಿಯು ಪ್ರಾರಂಭವಾದರೆ, ಅಂಥ ಸದಸ್ಯನು ಮುಂದಿನ ಹಣಕಾಸು ವರ್ಷ ಪ್ರಾರಂಭವಾದ ನಂತರ ಎರಡು ತಿಂಗಳೊಳಗೆ ತನ್ನ ಘೋಷಣೆಯನ್ನು ದಾಖಲು ಮಾಡತಕ್ಕದ್ದು.

ಭಾರತ ಸಂವಿಧಾನದ ಅನುಚ್ಛೇದ 243-ಬಿ ರಂತೆ ಗ್ರಾಮ ಪಂಚಾಯತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯತಿಯು ಸ್ಥಳೀಯ ಪ್ರಾಧಿಕಾರವಾಗಿರುತ್ತದೆ. ಸದರಿ ಅಧಿನಿಯಮ ಪ್ರಕರಣ 286 ರಂತೆ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಸದಸ್ಯರು ಮತ್ತು ಅವುಗಳ ಅಧಿಕಾರಿಗಳು ಮತ್ತು ನೌಕರರು ಭಾರತ ದಂಡ ಸಂಹಿತೆಯ 21ನೇ ಪ್ರಕರಣ ಮತ್ತು ಭ್ರಷ್ಟಾಚಾರ ಅಧಿನಿಯಮ, 1988 ರ ಅರ್ಥ ವ್ಯಾಪ್ತಿಯಲ್ಲಿ 'ಲೋಕ ನೌಕರ' ಎಂಬುದಾಗಿ ಭಾವಿಸಲಾಗಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಗ್ರಾಮ ಪಂಚಾಯತಿ ಸದಸ್ಯರು ಎರಡು ಲಕ್ಷಕ್ಕಿಂತ ಹೆಚ್ಚಿನ ಚರ ಮತ್ತು ಸ್ಥಿರ ಆಸ್ತಿಯನ್ನು ಮತ್ತು ಹೊಣೆಗಾರಿಕೆಯನ್ನು ಹೊಂದಿರುವುದರ ಬಗ್ಗೆ ರಾಜ್ಯ ಚುನಾವಣಾ ಆಯೋಗದ ಮುಂದೆ ಘೋಷಣೆಯನ್ನು ನಮೂನೆ-1 ರಲ್ಲಿ ದಾಖಲು ಮಾಡುವ ವ್ಯವಸ್ಥೆಯನ್ನು ರದ್ದುಗೊಳಿಸಲು ಅವಕಾಶವಿರುವುದಿಲ್ಲ.

ಸಂಖ್ಯೆ:RDPR 343 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.